ಕರ್ನಾಟಕ ಸರ್ಕಾರ

# **ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಆ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು-01. ದಿನಾಂಕ:24-01-2022

## **ಪ್ರಕಟಣೆ**

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:17.10.2021.

* * * * * * *

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಿರುವಂತೆ, ರಾಜ್ಯವ್ಯಾಪಿ ವಿಷಯವಾರು ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಈ ಮೂಲಕ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳ ಅಂಕಪಟ್ಟಿ ಮತ್ತು ತಾತ್ಕಾಲಿಕ ಆಯ್ಕೆ ಪಟ್ಟಿಯ ಬಗೆಗಿನ ಮಾಹಿತಿಯನ್ನು ಈ ಕೆಳಗಿನಂತೆ ನೀಡಲಾಗಿದೆ.

1) ಸರ್ಕಾರಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವ ಅಭ್ಯರ್ಥಿಗಳನ್ನು ಪರಿಗಣಿಸಿ ಅಭ್ಯರ್ಥಿಗಳ ಅಂಕಪಟ್ಟಿ ಮತ್ತು ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಸಿದ್ಧಪಡಿಸಲಾಗಿದೆ.

2) ಈ ಆಯ್ಕೆಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ವಿಷಯವಾರು ವೇಳಾಪಟ್ಟಿಯನ್ವಯ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಕಾಲೇಜನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲಾಗುವುದು.

3) ಕಾಲೇಜುವಾರು ಕಾರ್ಯಭಾರಕ್ಕೆ ಅನುಗುಣವಾಗಿ ಆಯ್ಕೆಯಾಗಿರುವ ಅತಿಥಿ ಉಪನ್ಯಾಸಕರಿಗೆ ಜ್ಯೇಷ್ಠತೆ ಅನುಸಾರ ಕಲಾ & ವಾಣಿಜ್ಯ ವಿಷಯಗಳಿಗೆ 15 ಗಂಟೆಗಳು ಮತ್ತು ವಿಜ್ಞಾನ / ಪ್ರಾಯೋಗಿಕ ತರಗತಿ ಇರುವ ವಿಷಯಗಳಿಗೆ 19 ಗಂಟೆಗಳ ಕಾರ್ಯಭಾರವನ್ನು ನೀಡಲಾಗುವುದು. ಸಂಬಂಧಪಟ್ಟ ಕಾಲೇಜುಗಳಲ್ಲಿ ಮೇಲಿನಂತೆ ಕಾರ್ಯಭಾರ ಇಲ್ಲದಿದ್ದಲ್ಲಿ ಭಾಗಶಃ ಲಭ್ಯವಿರುವ ಕಾರ್ಯಭಾರವನ್ನು ನೀಡಲಾಗುವುದು. (ಜೇಷ್ಟತೆ ಮತ್ತು ಕಾರ್ಯಭಾರದ ಲಭ್ಯತೆಗೆ ಅನುಸಾರವಾಗಿ ಗರಿಷ್ಟ 15/19 ಗಂಟೆಗಳ ಕಾರ್ಯಭಾರ ಅಥವ ಭಾಗಶಃ ಕಾರ್ಯಭಾರವನ್ನು ನೀಡಲಾಗುವುದು.)

4) ಆನ್ ಲೈನ್ ಕೌನ್ಸಿಲಿಂಗ್ ವೇಳಾಪಟ್ಟಿಯನ್ನು ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದೆ.

5) ಕಾಲೇಜುವಾರು ಮತ್ತು ವಿಷಯವಾರು ಅಗತ್ಯವಿರುವ ಅಂದಾಜು ಅತಿಥಿ ಉಪನ್ಯಾಸಕರುಗಳ ಸಂಖ್ಯೆಯನ್ನು ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದೆ.

Sd/-

**ಆಯುಕ್ತರು**
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ